ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

09

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE 27/1/21

## ಬಿಜೆಪಿಯಲ್ಲಿ ಮುಗಿಯದ ಗೊಂದಲ
## ಸಭಾಪತಿ ಮೇಲೆ ಕಣ್ಣಿಟ್ಟಿರುವ ಜೆಡಿಎಸ್-ಬಿಜೆಪಿ

# 29ಕ್ಕೆ ಉಪಸಭಾಪತಿ ಚುನಾವಣೆ: ಜೆಡಿಎಸ್ ಸಭೆ ಸಾಧ್ಯತೆ

27/1/21

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಬಿಜೆಪಿ-ಜೆಡಿಎಸ್ ಎರಡೂ ಪಕ್ಷಗಳು ಸಭಾಪತಿ ಸ್ಥಾನದ ಮೇಲೆ ಕಣ್ಣಿಟ್ಟಿರುವುದರಿಂದ ಉಪಸಭಾಪತಿ ಸ್ಥಾನದ ಮೇಲೆ ಎರಡೂ ಪಕ್ಷಗಳು ನಿರಾಸಕ್ತಿ ತೋರಿವೆ.

ವಿಧಾನಪರಿಷತ್ ಉಪಸಭಾಪತಿ ಧರ್ಮೇಗೌಡ ಆತ್ಮಹತ್ಯೆಯಿಂದ ತೆರವಾಗಿರುವ ಉಪಸಭಾಪತಿ ಸ್ಥಾನಕ್ಕೆ 29ರಂದು ಚುನಾವಣೆ ನಡೆಯಲಿದ್ದು, ಯಾರನ್ನು ಅಭ್ಯರ್ಥಿಯನ್ನಾಗಿ ಮಾಡಬೇಕು ಎನ್ನುವ ಬಗ್ಗೆ ಸ್ಪಷ್ಟ ತೀರ್ಮಾನಕ್ಕೆ ಬಿಜೆಪಿ ಅಥವಾ ಜೆಡಿಎಸ್ ಬಂದಿಲ್ಲ. ಬಿಜೆಪಿ ಹಾಗೂ ಜೆಡಿಎಸ್ ಮೂರು ಪಕ್ಷಕ್ಕೂ ಸ್ವತಂತ್ರವಾಗಿ ಉಪಸಭಾಪತಿ ಸ್ಥಾನವನ್ನು ಗೆಲ್ಲುವ ಅವಕಾಶವಿಲ್ಲ. ಆದ್ದರಿಂದ ಇದೀಗ ಉಪಸಭಾಪತಿ ಸ್ಥಾನ ಪಡೆದರೆ ಸಭಾಪತಿ ಸ್ಥಾನ ಕೈತಪ್ಪುವ ಆತಂಕ ಇರುವುದರಿಂದ ಹೆಚ್ಚು ಆಸಕ್ತಿ ತೋರುತ್ತಿಲ್ಲ ಎನ್ನುವ ಮಾತುಗಳು ಕೇಳಿಬಂದಿವೆ.

ಬಿಜೆಪಿ ನಾಯಕರು ಈಗಾಗಲೇ ಸಭಾಪತಿ ಸ್ಥಾನ ತಮ್ಮ ಪಕ್ಷಕ್ಕೆ ಬೇಕೆಂಬ ಬೇಡಿಕೆಯನ್ನು ಇಟ್ಟಿದ್ದು, ಉಪಸಭಾಪತಿ ಸ್ಥಾನವನ್ನು ಜೆಡಿಎಸ್‌ಗೆ ಬಿಟ್ಟು ಕೊಡಲು ಸಿದ್ಧರಿದ್ದಾರೆ. ಈ ಫಾರ್ಮುಲಾಗೆ ಜೆಡಿಎಸ್ ವರಿಷ್ಠ ದೇವೇಗೌಡರೂ ಒಪ್ಪಿದ್ದಾರೆ. ಆದರೆ, ಬಸವರಾಜ ಹೊರಟ್ಟಿ ಅವರು, ತಮಗೆ ಸಭಾಪತಿ ಸ್ಥಾನವೇ ಬೇಕು ಎಂದು ಹಠ ಹಿಡಿದಿರುವುದರಿಂದ ಸಮಸ್ಯೆ [illegible]ಲವಾಗಿದೆ.

## ಇಂದು ಸಭೆ ಸಾಧ್ಯತೆ

ನಾಮಪತ್ರ ಸಲ್ಲಿಕೆಗೆ ಬುಧವಾರ ಕೊನೆಯ ದಿನವಾಗಿರುವುದರಿಂದ ಜೆಡಿಎಸ್ ನಾಯಕರು ಮಂಗಳವಾರ ಸಭೆ ನಡೆಸುವ ಸಾಧ್ಯತೆಯಿದೆ. ಬಿಜೆಪಿ ನಾಯಕರು ನೀಡಿರುವ ಆಫರ್ ಅನ್ನು ಒಪ್ಪಿಕೊಳ್ಳಬೇಕೇ ಅಥವಾ ಸಭಾಪತಿ ಸ್ಥಾನಕ್ಕಾಗಿ ತಮ್ಮ ಹೋರಾಟವನ್ನು ಮುಂದುವರಿಸಬೇಕೇ ಎನ್ನುವ ಬಗ್ಗೆ ಸ್ಪಷ್ಟ ತೀರ್ಮಾನವನ್ನು ಈ ಸಭೆಯಲ್ಲಿ ತೆಗೆದುಕೊಳ್ಳುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ.

ಜ.28ರಂದು ವಿಧಾನಮಂಡಲ ಅಧಿವೇಶನ ಸಮಾವೇಶಗೊಳ್ಳುತ್ತಿರುವುದರಿಂದ ಅದಕ್ಕೂ ಮೊದಲು ಉಪಸಭಾಪತಿ ಬಗ್ಗೆ ಚರ್ಚೆಯಾಗಬೇಕು. ಅಲ್ಲದೇ ಉಪಸಭಾಪತಿ ಆಯ್ಕೆಯಾಗುತ್ತಿದ್ದಂತೆ ಸಭಾಪತಿ ಸ್ಥಾನಕ್ಕೆ ಪ್ರತಾಪ್ ಚಂದ್ರ ಶೆಟ್ಟಿ ರಾಜೀನಾಮೆ ಸಲ್ಲಿಸಲಿದ್ದಾರೆ. ಮೇಲ್ಮನೆಯಲ್ಲಿ ಬಿಜೆಪಿ-ಜೆಡಿಎಸ್ ಹೊಂದಾಣಿಕೆ ಮಾಡಿಕೊಂಡಿದ್ದು, ಸಭಾಪತಿ ಸ್ಥಾನವನ್ನು ತನಗೆ ಬಿಟ್ಟುಕೊಡುವಂತೆಯೂ ಉಪಸಭಾಪತಿ ಸ್ಥಾನವನ್ನು ಬಿಜೆಪಿ ಹೊಂದುವಂತೆಯೂ ಜೆಡಿಎಸ್ ನಾಯಕ ಎಚ್.ಡಿ.ಕುಮಾರಸ್ವಾಮಿ ಮುಖ್ಯಮಂತ್ರಿ ಯಡಿಯೂರಪ್ಪನವರಿಗೆ ಬೇಡಿಕೆಯಿಟ್ಟಿದ್ದಾರಾದರೂ ಬಿಜೆಪಿ ವರಿಷ್ಠರು ಈ ಬಗ್ಗೆ ಇನ್ನೂ ಸ್ಪಷ್ಟನೆ ನೀಡಿಲ್ಲ.